



ಅರುಣ ಪಿ. ಭಟ್ಟ


## ವಾರಭವಿಷ್ಯ: 25.09.2025ರಿಂದ 01.10.2025ರವರೆಗೆ




ಕುಟುಂಬದ ಬಗ್ಗೆ ಹೆಮ್ಮೆಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸಗಳನ್ನು ಪೂರೈಸುತ್ತೀರಿ. ನಿಮ್ಮ ಸಹೋದ್ಯೋಗಿಗಳ ಜತೆಗೆ ಇರುವ ಭಿನ್ನಾಭಿಪ್ರಾಯ ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ: **26.** ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ ಇದೆ. ಈ ವಾರ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಬಾಕಿ ಕೆಲಸಗಳನ್ನು ಪೂರ್ಣಗೊಳಿಸುತ್ತೀರಿ. ಶುಭದಿನ: **27.** ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.





ಆಕಸ್ಮಿಕ ಖರ್ಚು ಸಂಭವ. ಆಸ್ತಿ ಖರೀದಿ ಬಗ್ಗೆ ಚಿಂತನೆ. ಕಲಾವಿದರಿಗೆ ಸಾಹಿತಿಗಳಿಗೆ ಉತ್ತಮ ವಾರ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು.ವೃತ್ತಿ ವ್ಯವಹಾರದಲ್ಲಿ ಲಾಭ ವ್ಯಾವಹಾರಿಕ ಅನುಕೂಲ. ಸರ್ಕಾರಿ ಕೆಲಸ ಶೀಘ್ರ ಆಗುವುದು. ತಂದೆ ತಾಯಿಯವರ ಆರೋಗ್ಯ ಸುಧಾರಣೆ, ಮಾನ, ಮನ್ನಣೆ ದೊರೆಯುವುದು. ಶುಭದಿನ: **29.**ಚಂಡಿ ಪಾರಾಯಣ ಮಾಡಿರಿ.





ಮನಸ್ಸಿನಲ್ಲಿ ನವೋಲ್ಲಾಸ ಬರುವುದು. ಧರ್ಮ, ದಾನಕ್ಕಾಗಿ ಖರ್ಚು. ಮಿತ್ರರಿಗೆ ಸಹಾಯ. ವ್ಯಾಪಾರದಲ್ಲಿ ಅಧಿಕ ಲಾಭ ಹಳೆಯ ಮಿತ್ರರ ಆಗಮನ. ಹಲವು ದಿನಗಳ ಸಮಸ್ಯೆ ಬಗೆಹರೆಯುವುದು. ಹೊಟ್ಟೆನೋವಿನ ಕಾಟ. ಮನೆಯಲ್ಲಿ ಸಂಭ್ರಮ. ಮಕ್ಕಳಿಂದ ಶುಭವಾರ್ತೆ. ಮಹತ್ವದ ಕಾಗದ ಪತ್ರಗಳ ರಕ್ಷಣೆ. ಸಹೋದರರ ಸಹಾಯ. ವಿದ್ಯಾರ್ಥಿಗಳಿಗೆ ಶುಭ. ಶುಭದಿನ: **28.** ಶಿವ ಕವಚ ಓದಿರಿ.




ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಆದರೆ ವಿರೋಧಿ ಪಾಳಯದವರು ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ಶುಭದಿನ: **27.** ಸೌಂದರ್ಯಲಹರಿ ಪಠಿಸಿರಿ.





ತಾಂತ್ರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಯತ್ನಿಸುತ್ತೀರಿ. ಸಕಾರಾತ್ಮಕ ಬೆಳವಣಿಗೆ ಅನುಭವಕ್ಕೆ ಬರುತ್ತದೆ. ಕುಟುಂಬದೊಳಗೆ ಸಂತಸದ ವಾತಾವರಣ ಇರುತ್ತದೆ. ನಿಮ್ಮ ಆದಾಯ ಮೂಲಗಳಿಂದ ಬರುವ ಗಳಿಕೆ ಮತ್ತಷ್ಟು ಹೆಚ್ಚಾಗಲಿದೆ. ದೀರ್ಘಾವಧಿಯಲ್ಲಿ ದೊಡ್ಡ ಮಟ್ಟದ ಲಾಭ ಪಡೆಯುವ ಅವಕಾಶ ಇದೆ. ಹಣಕಾಸಿನ ಖರ್ಚು ಹೆಚ್ಚಾಗುವ ಸಾಧ್ಯತೆಗಳಿವೆ. ಶುಭದಿನ: **29.** ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.





ವೃತ್ತಿ ಬದುಕಿನಲ್ಲಿ ಪ್ರಗತಿ ಕಾಣುವ ಯೋಗ ಇದೆ. ವೃತ್ತಿಯಲ್ಲಿ ಅತ್ಯುತ್ತಮವಾದ ಲಾಭ ಇದೆ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಅತ್ಯುತ್ತಮ ಅವಕಾಶಗಳಿವೆ. ವಾರದ ಮಧ್ಯ ಭಾಗದಲ್ಲಿ ಪ್ರಗತಿ ಮತ್ತಷ್ಟು ವೇಗ ಪಡೆದುಕೊಳ್ಳುತ್ತದೆ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಆರೋಗ್ಯ ಚೆನ್ನಾಗಿರುತ್ತದೆ. ಶುಭದಿನ: **30.** ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.





ಈ ಅವಧಿಯಲ್ಲಿ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯ. ಸಮಯದ ಕೊರತೆ ಕಾಡುತ್ತದೆ. ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಆರೋಗ್ಯ ಉತ್ತಮವಾಗಿರುತ್ತದೆ. ನಿಮ್ಮ ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ. ಆರ್ಥಿಕ ಸ್ಥಿತಿ ಅತ್ಯುತ್ತಮವಾಗಿರುತ್ತದೆ. ವೈಯಕ್ತಿಕ ಸಂಬಂಧಗಳು ಉತ್ತಮವಾಗಿರುತ್ತದೆ. ಶುಭದಿನ: **28.** ಶ್ರೀದುರ್ಗಾಪಾರಾಯಣ ಮಾಡಿರಿ.





ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಕೂಲಂಕಷವಾಗಿ ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಂತೆ ಸನ್ನಿವೇಶಗಳು ನಿಮಗೆ ಪೂರಕ ಆಗಲಿದೆ. ವಾರದ ಅಂತ್ಯಕ್ಕೆ ಕುಟುಂಬದವರ ಬೆಂಬಲ ದೊರೆಯಲಿದೆ. ಉನ್ನತ ಶಿಕ್ಷಣದಲ್ಲಿ ಅತ್ಯುತ್ತಮ ಪ್ರಗತಿ ಇದೆ. ಆರೋಗ್ಯ ಸಮಸ್ಯೆಗಳು ಕಾಡುತ್ತಿದ್ದಲ್ಲಿ ಸುಧಾರಣೆ ಆಗಲಿದೆ. ಶುಭದಿನ: **27.** ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವ್ಯಾಪಾರ ಉದ್ಯಮದಲ್ಲಿ ಪ್ರಗತಿ. ಈ ವಾರ ಆರೋಗ್ಯದಲ್ಲಿ ಯಾವುದೇ ಸಮಸ್ಯೆ ಕಾಡುವುದಿಲ್ಲ. ಇದರಿಂದ ಎಷ್ಟೇ ಚಟುವಟಿಕೆ ಒತ್ತಡದ ಕೆಲಸ ಇದ್ದರೂ ಆರಾಮವಾಗಿ ಪೂರೈಸಲು ನಿಮ್ಮಿಂದ ಸಾಧ್ಯವಾಗಲಿದೆ. ವೈವಾಹಿಕ ಜೀವನ ಸಂತೋಷದಾಯಕವಾಗಿ ಇರುತ್ತದೆ. ವಾರದ ಮಧ್ಯಭಾಗದಲ್ಲಿ ಉದ್ಯೋಗ ನಿಮಿತ್ತವಾಗಿ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ: **29.** ಕಾಲಭೈರವನ ಸೇವೆ ಮಾಡಿರಿ.




ಹಣದ ಸದುಪಯೋಗಕ್ಕೆ ಯೋಜನೆ ರೂಪಿಸಲಿದ್ದೀರಿ. ಮಾರಾಟ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಲಾಭ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪಲಿದ್ದೀರಿ. ಪ್ರೀತಿ ಪ್ರೇಮದಲ್ಲಿ ಇರುವವರು ಸಂಗಾತಿಯ ಭಾವನೆಗಳಿಗೆ ಗೌರವ ನೀಡುತ್ತೀರಿ. ಶುಭದಿನ: **30.** ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಉನ್ನತ ಶಿಕ್ಷಣದಲ್ಲಿ ಯಶಸ್ಸು ದೊರೆಯುವ ಸಾಧ್ಯತೆ ಹೆಚ್ಚಿದೆ. ದೇವತಾ ಆರಾಧನೆಗೆ ಶ್ರಮ ಹಾಕುತ್ತೀರಿ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆ ಇದೆ. ಆರೋಗ್ಯದಲ್ಲಿ ಚೇತರಿಕೆ ಕಾಣಿಸಿಕೊಳ್ಳುತ್ತದೆ. ಇದರಿಂದ ನಿಮ್ಮ ಮನಸಿಗೆ ಸಂತೋಷವಾಗುತ್ತದೆ. ಶುಭದಿನ: **28.** ಕನಕಧಾರಾ ಸ್ತೋತ್ರ ಪಠಣಮಾಡಿರಿ.